# All India Radio: Bangalore
# National Bulletin In Kannada
# 13.12.2025 19.35 p.m.

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ನಕ್ಸಲ್ ವಾದದ ನಿರ್ಮೂಲನೆಯೊಂದಿಗೆ ಪ್ರಗತಿಯ ಹೊಸ ಅಧ್ಯಾಯ ಆರಂಭ - ಅಮಿತ್ ಶಾ

೨. ಭಾರತೀಯ ರಕ್ಷಣಾ ಪಡೆಗಳು ಬದಲಾಗುತ್ತಿರುವ ಸನ್ನಿವೇಶಕ್ಕೆ ಹೊಂದಿಕೊಳ್ಳಲು ಸನ್ನದ್ಧ

೩. ದೇಶದಲ್ಲಿ ೫೩ ಟೆಲಿ ಮಾನಸ್ ಘಟಕಗಳ ಸ್ಥಾಪನೆ; ೨೯ ಲಕ್ಷಕ್ಕೂ ಹೆಚ್ಚು ಜನರಿಂದ ಸಹಾಯವಾಣಿಗೆ ಕರೆ

೪. ತೆರಿಗೆದಾರರು ತಪ್ಪು ಮಾಹಿತಿಯನ್ನು ಸರಿಪಡಿಸಲು ಆದಾಯ ತೆರಿಗೆ-ರಿಟರ್ನ್ ಗಳನ್ನು ನಡ್ಜ್ ಅಭಿಯಾನದಡಿಯಲ್ಲಿ ಅಪ್ ಡೇಟ್ ಮಾಡುವಂತೆ ಕೇಂದ್ರ ನೇರ ತೆರಿಗೆಗಳ ಮಂಡಳಿ ಮನವಿ

೫. ಹಿಮಾಚಲ ಪ್ರದೇಶದ ಧರ್ಮಶಾಲಾದಲ್ಲಿ ನಾಳೆ ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯ

***************

ನಕ್ಸಲ್ ವಾದದಿಂದ ಯಾರಿಗೂ ಪ್ರಯೋಜನವಾಗುವುದಿಲ್ಲ, ಶಾಂತಿ ಮಾತ್ರ ಅಭಿವೃದ್ಧಿಗೆ ದಾರಿ ಮಾಡಿಕೊಡಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಹೇಳಿದ್ದಾರೆ.

ಛತ್ತೀಸ್ ಗಢದ ಜಗದಲ್ ಪುರದಲ್ಲಿ ನಡೆದ ಬಸ್ತರ್ ಒಲಿಂಪಿಕ್ಸ್ ನ ಸಮಾರೋಪ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ೨೦೨೬ರ ಮಾರ್ಚ್ ೩೧ ರೊಳಗೆ ನಕ್ಸಲ್ ವಾದವನ್ನು ಕೊನೆಗಾಣಿಸುವ ಸರ್ಕಾರದ ಸಂಕಲ್ಪವನ್ನು ಪುನರುಚ್ಚರಿಸಿದರು.

ಮುಂದಿನ ಐದು ವರ್ಷಗಳಲ್ಲಿ ಛತ್ತೀಸ್ ಗಢದ ಬಸ್ತರ್ ವಿಭಾಗವನ್ನು ದೇಶದ ಅತ್ಯಂತ ಅಭಿವೃದ್ಧಿ ಹೊಂದಿದ ಬುಡಕಟ್ಟು ಪ್ರದೇಶವನ್ನಾಗಿ ರೂಪಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ನಕ್ಸಲ್ ವಾದವು ಈ ಪ್ರದೇಶದಲ್ಲಿ ಅಭಿವೃದ್ಧಿಯನ್ನು ಸ್ಥಗಿತಗೊಳಿಸಿದ್ದು, ಈ ಪಿಡುಗಿನ ನಿರ್ಮೂಲನೆಯೊಂದಿಗೆ ಪ್ರಗತಿಯ ಹೊಸ ಅಧ್ಯಾಯ ಆರಂಭವಾಗಲಿದೆ ಎಂದು ಅಮಿತ್ ಶಾ ಹೇಳಿದ್ದಾರೆ.

ನಿಷೇಧಿತ ಮಾವೋವಾದಿಗಳೊಂದಿಗೆ ನಂಟು ಹೊಂದಿರುವವರು ಶಸ್ತ್ರಾಸ್ತ್ರಗಳನ್ನು ತ್ಯಜಿಸಿ ಸಮಾಜದ ಮುಖ್ಯವಾಹಿನಿಗೆ ಸೇರುವಂತೆ ಅವರು ಮನವಿ ಮಾಡಿದರು.

ಮೊದಲೆಲ್ಲಾ ಗುಂಡಿನ ಸದ್ದು ಕೇಳುತ್ತಿದ್ದು, ಈಗ ಶಾಲಾ ಗಂಟೆಗಳು ಮೊಳಗುತ್ತಿವೆ; ದೂರದ ಕನಸಾಗಿದ್ದ ಅಭಿವೃದ್ಧಿಯು ಈಗ ರಸ್ತೆಗಳು, ರೈಲ್ವೆಗಳು ಮತ್ತು ಹೆದ್ದಾರಿಗಳ ನಿರ್ಮಾಣದೊಂದಿಗೆ ಪ್ರಗತಿಯ ಹಾದಿಯಲ್ಲಿ ಸಾಗಿದೆ. ಮುಂದಿನ ಬಸ್ತಾರ್ ಒಲಿಂಪಿಕ್ಸ್ ನಡೆಯುವ ವೇಳೆಗೆ, ಬಸ್ತಾರ್ ಮಾತ್ರವಲ್ಲ, ಇಡೀ ದೇಶ ನಕ್ಸಲ್‌ವಾದದಿಂದ ಮುಕ್ತವಾಗಲಿದೆ ಎಂದು ಅವರು ಹೇಳಿದರು.

ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ, ವಿಧಾನಸಭಾ ಸ್ಪೀಕರ್ ಡಾ. ರಮಣ್ ಸಿಂಗ್, ಉಪಮುಖ್ಯಮಂತ್ರಿಗಳಾದ ಅರುಣ್ ಸಾವೊ ಮತ್ತು ವಿಜಯ್ ಶರ್ಮಾ ಹಾಗೂ ಮಾಜಿ ಅಂತರರಾಷ್ಟ್ರೀಯ ಫುಟ್ಬಾಲ್ ಆಟಗಾರ ಬೈಚುಂಗ್ ಭುಟಿಯಾ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಶರಣಾದ ನಕ್ಸಲರು ಮತ್ತು ನಕ್ಸಲ್ ಹಿಂಸಾಚಾರದಿಂದ ಬಾಧಿತರಾದವರು ಸೇರಿದಂತೆ ಏಳು ಜಿಲ್ಲೆಗಳ ಸುಮಾರು ೩,೫೦೦ ಆಟಗಾರರು ಒಲಿಂಪಿಕ್ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು.

***************

ಭಾರತೀಯ ರಕ್ಷಣಾ ಪಡೆಗಳು ಬದಲಾಗುತ್ತಿರುವ ಸನ್ನಿವೇಶಕ್ಕೆ ಹೊಂದಿಕೊಂಡು ಸನ್ನದ್ಧವಾಗಿದ್ದು ಕಾಲಕ್ಕನುಗುಣವಾಗಿ ಪ್ರಸ್ತುತವಾಗಿರಲು ಸುಧಾರಣೆಗಳನ್ನು ಅಳವಡಿಸಿಕೊಳ್ಳಲು ಬದ್ಧ ಎಂದು ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಪ್ರತಿಪಾದಿಸಿದ್ದಾರೆ.

ಹೈದರಾಬಾದ್ ಬಳಿಯ ದುಂಡಿಗಲ್‌ನಲ್ಲಿರುವ ವಾಯುಪಡೆ ಅಕಾಡೆಮಿಯಲ್ಲಿ ಇಂದು ನಡೆದ ೨೧೬ ನೇ ಕೋರ್ಸ್‌ನ ಸಂಯೋಜಿತ ಪದವಿ ಪರೇಡ್ (ಸಿಜಿಪಿ) ಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸದೃಢ ಸಂಸ್ಥೆಗಳು, ಪ್ರಜಾಪ್ರಭುತ್ವ ಸ್ಥಿರತೆ ಮತ್ತು ಸಶಸ್ತ್ರ ಪಡೆಗಳ ಅಚಲ ವೃತ್ತಿಪರತೆಯ ಮೇಲೆ ಭಾರತದ ಶಕ್ತಿ ನಿಂತಿದೆ  ಎಂದರು.

ಭಾರತೀಯ ಸಶಸ್ತ್ರ ಪಡೆಗಳಲ್ಲಿ ವರ್ಷವಿಡಿ ದಿನದ ೨೪ ಗಂಟೆಯೂ ಕಾರ್ಯಾಚರಣೆಗೆ ಸನ್ನದ್ಧವಾಗಿರುವ ಅತ್ಯುನ್ನತ ವೃತ್ತಿಪರತೆಯ ಯುಗವಾಗಿ ಆಳವಾದ ಪರಿವರ್ತನೆ ಪ್ರಗತಿಯಲ್ಲಿದೆ. ಸಂಯೋಜಿತ ವಿನ್ಯಾಸಗಳು, ಜಂಟಿ ಕಾರ್ಯಾಚರಣೆಗಳು ಮತ್ತು ಆತ್ಮನಿರ್ಭರ ಭಾರತದ ಗುರಿಯು ಭಾರತದ ಮಿಲಿಟರಿ ಶಕ್ತಿಯನ್ನು ರೂಪಿಸುತ್ತಿದೆ ಎಂದು ಅವರು ಹೇಳಿದರು.

ಭಾರತೀಯ ಕರಾವಳಿ ಪಡೆಯ ೮, ನೌಕಾಪಡೆಯ ೬ ಮತ್ತು ವಿಯೆಟ್ನಾಮ್‌ನ ಇಬ್ಬರು ಸೇರಿದಂತೆ ೨೪೪ ಪ್ರಶಿಕ್ಷಣಾರ್ಥಿಗಳು ಪರೇಡ್‌ನಲ್ಲಿ ಪಾಲ್ಗೊಂಡಿದ್ದು, ವಿವಿಧ ತಂಡಗಳ ವೈಮಾನಿಕ ಪ್ರದರ್ಶನಗಳು ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿತ್ತು.

***************

ಕೇರಳದಲ್ಲಿ ನಡೆದ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ವಿರೋಧ ಪಕ್ಷ ಯುಡಿಎಫ್ ೩೬೭ ಗ್ರಾಮ ಪಂಚಾಯಿತಿಗಳಲ್ಲಿ ಮತ್ತು ಮೂರು ನಗರಸಭೆಗಳಲ್ಲಿ ಜಯ ಶಾಲಿಯಾಗಿದೆ.

ಆಡಳಿತಾರೂಢ ಸಿಪಿಎಂ ನೇತೃತ್ವದ ಎಲ್‌ಡಿಎಫ್ ತನ್ನ ಹಿಂದಿನ ಗೆಲುವನ್ನು ಮತ್ತೆ ಸಾಧಿಸುವಲ್ಲಿ ವಿಫಲವಾಗಿದ್ದು, ಕೇವಲ ೨೩೪ ಪಂಚಾಯತ್‌ಗಳಲ್ಲಿ ಗೆಲುವು ಸಾಧಿಸಿದೆ.

ತಿರುವನಂತಪುರ ಪಾಲಿಕೆ ಮತ್ತು ಐದು ಗ್ರಾಮ ಪಂಚಾಯತ್‌ಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಜಯಗಳಿಸಿದ್ದು, ಗಮನಾರ್ಹ ಪ್ರಗತಿ ಸಾಧಿಸಿದೆ.

***************

ವಂದೇ ಭಾರತ್ ರೈಲುಗಳಲ್ಲಿ ಸ್ಥಳೀಯ ಆಹಾರ ಒದಗಿಸುವ ಬಗ್ಗೆ ಅಧಿಕಾರಿಗಳೊಂದಿಗೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇಂದು ಚರ್ಚೆ ನಡೆಸಿದ್ದಾರೆ.

ನವದೆಹಲಿಯ ರೈಲ್ವೆ ಭವನದಲ್ಲಿಂದು ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಈ ಉಪಕ್ರಮವು ಪ್ರಯಾಣಿಕರ ಅನುಭೂತಿಯನ್ನು ವರ್ಧಿಸಲಿದೆ, ಜೊತೆಗೆ ಅವರು ಸಂಚರಿಸುವ ಪ್ರದೇಶಗಳ ಸಂಸ್ಕೃತಿ ಮತ್ತು ರುಚಿಯನ್ನು ಪರಿಚಯಿಸಲಿದೆ ಎಂದರು.

ಕಟ್ಟುನಿಟ್ಟಿನ ಕ್ರಮದ ಜಾರಿಯಿಂದಾಗಿ ನಕಲಿ ಖಾತೆಗಳನ್ನು ನಿಷ್ಕ್ರಿಯಗೊಳಿಸಲಾಗಿದೆ. ಪ್ರಯಾಣಿಕರ ಅನುಕೂಲಕ್ಕಾಗಿ ಟಿಕೆಟ್ ವ್ಯವಸ್ಥೆಯನ್ನು ಸುಲಭ ಮತ್ತು ಸುಲಲಿತಗೊಳಿಸುವುದನ್ನು ಖಾತರಿಪಡಿಸುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

***************

ದೇಶದ ೫೩ ಟೆಲಿ ಮಾನಸ್ ಘಟಕಗಳು ೧೯.೮೧ ಲಕ್ಷಕ್ಕೂ ಹೆಚ್ಚು ಸಹಾಯವಾಣಿ ಕರೆಗಳನ್ನು ಸ್ವೀಕರಿಸಿದೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ಹೇಳಿದ್ದಾರೆ.

ದೇಶದಲ್ಲಿ ಗುಣಮಟ್ಟದ ಮಾನಸಿಕ ಆರೋಗ್ಯ ಸಮಾಲೋಚನೆ ಮತ್ತು ಆರೈಕೆ ಸೇವೆಗಳ ಲಭ್ಯತೆಯನ್ನು ಸುಧಾರಿಸಲು ಕೇಂದ್ರ ಸರ್ಕಾರ ೨೦೨೨ರ ಅಕ್ಟೋಬರ್ ೧೦ ರಂದು "ರಾಷ್ಟ್ರೀಯ ಟೆಲಿ ಮಾನಸಿಕ ಆರೋಗ್ಯ ಕಾರ್ಯಕ್ರಮ" ಪ್ರಾರಂಭಿಸಿದ್ದು, ಇದು ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುವ ಮಹಿಳೆಯರಲ್ಲಿ ಒತ್ತಡವನ್ನು ತಗ್ಗಿಸಲು ಸರ್ಕಾರದ ಬದ್ಧತೆ ಎಂದು ಅವರು ಪುನರುಚ್ಚರಿಸಿದ್ದಾರೆ.

೨೦೨೪ರ ನವೆಂಬರ್ ೨೬ ರ ವೇಳೆಗೆ ೩೬ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿ ಒಟ್ಟು ೫೩ ಟೆಲಿ ಮಾನಸ್ ಕೇಂದ್ರಗಳನ್ನು ತೆರೆಯಲಾಗಿದ್ದು, ರಾಜ್ಯಗಳು ಆಯ್ಕೆ ಮಾಡಿದ ಭಾಷೆಯನ್ನು ಆಧರಿಸಿ ೨೦ ಭಾಷೆಗಳಲ್ಲಿ ಟೆಲಿ-ಮಾನಸ್ ಸೇವೆಗಳು ಲಭ್ಯವಿದೆ. ಸಹಾಯವಾಣಿ ಸಂಖ್ಯೆಗೆ ಸುಮಾರು ೧೯ ಲಕ್ಷ ೮೧ ಸಾವಿರ ಕರೆಗಳು ಸ್ವೀಕೃತವಾಗಿದೆ ಎಂದು ಅವರು ಲೋಕಸಭೆಯಲ್ಲಿ ನಿನ್ನೆ ಪ್ರಶ್ನೆಯೊಂದಕ್ಕೆ ಉತ್ತರಿಸಿದ್ದಾರೆ.

***************

ತೆರಿಗೆದಾರರು ತಮ್ಮ ಆದಾಯ ತೆರಿಗೆ-ರಿಟರ್ನ್ ಗಳನ್ನು ಅಪ್ ಡೇಟ್ ಮಾಡಲು ಮತ್ತು ಒತ್ತಾಯಪೂರ್ವಕವಲ್ಲದೇ ದತ್ತಾಂಶ ಒದಗಿಸುವ ನಡ್ಜ್ ಅಭಿಯಾನದ ಅಡಿಯಲ್ಲಿ ಯಾವುದೇ ತಪ್ಪು ಮಾಹಿತಿಯನ್ನು ಸರಿಪಡಿಸುವಂತೆ ಕೇಂದ್ರ ನೇರ ತೆರಿಗೆಗಳ ಮಂಡಳಿ (ಸಿಬಿಡಿಟಿ) ಮನವಿ ಮಾಡಿದೆ.

ಈ ಅಭಿಯಾನದ ಕುರಿತು, ಈ ತಿಂಗಳ ೧೨ ರಿಂದ ತೆರಿಗೆದಾರರ ನೋಂದಾಯಿತ ಮೊಬೈಲ್ ಸಂಖ್ಯೆ ಮತ್ತು ಇಮೇಲ್‌ಗಳಿಗೆ ಎಸ್‌ಎಂಎಸ್ ಮತ್ತು ಇಮೇಲ್ ಸಂದೇಶ ರವಾನಿಸಲಾಗುತ್ತಿದ್ದು, ತೆರಿಗೆದಾರರು ತಮ್ಮ ಫೈಲಿಂಗ್ ಗಳಲ್ಲಿ ಸರಿಯಾದ ಮೊಬೈಲ್ ಮತ್ತು ಇಮೇಲ್ ವಿವರಗಳನ್ನು ಒದಗಿಸುವಂತೆ ಸಿಬಿಡಿಟಿ ಕೋರಿದೆ.

ತೆರಿಗೆದಾರ ಸ್ನೇಹಿ ಕ್ರಮವಾಗಿ ತಪ್ಪು ವಿನಾಯಿತಿಗಳನ್ನು ಸರಿಪಡಿಸಲು ಕಳೆದ ತಿಂಗಳು ನಾನ್ ಇಂಟ್ರೂಸಿವ್ ಯೂಸೇಜ್ ಆಫ್ ಡೇಟಾ ಟು ಗೈಡ್ ಎನೇಬಲ್ - ನಡ್ಜ್ ಉಪಕ್ರಮವನ್ನು ಪ್ರಾರಂಭಿಸಿದೆ. ಹೆಚ್ಚಿನ ಮಾಹಿತಿ ಆದಾಯ ತೆರಿಗೆ ಇಲಾಖೆಯ ಜಾಲತಾಣ www(dot)incometax(dot)gov(dot)in ನಲ್ಲಿ ಲಭ್ಯವಿದೆ.

***************

ಬೆಂಗಳೂರು ಸಮೀಪ ೨ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸುವ ಸಂಬಂಧ ಸ್ಥಳದ ಅನುಕೂಲ ಮತ್ತು ತಾಂತ್ರಿಕ ಹಾಗೂ ಆರ್ಥಿಕ ಕಾರ್ಯಸಾಧ್ಯತಾ ವರದಿ ಸಿದ್ಧಪಡಿಸಲು ಪರಿಣತ ಸಲಹಾ ಸಂಸ್ಥೆಯ

ಆಯ್ಕೆಗಾಗಿ ಟೆಂಡರ್ ಆಹ್ವಾನಿಸಲಾಗಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ಬೆಂಗಳೂರಿನಲ್ಲಿಂದು ತಿಳಿಸಿದ್ದಾರೆ.

ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮಕ್ಕೆ ಅರ್ಜಿ ಸಲ್ಲಿಸಲು ಮುಂದಿನ ತಿಂಗಳ ೧೨ ಕೊನೆಯ ದಿನವಾಗಿದೆ. ೨ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕಾಗಿ ರಾಜ್ಯ ಸರ್ಕಾರ ಕನಕಪುರ ಬಳಿಯ ಚೂಡಹಳ್ಳಿ, ಸೋಮನಹಳ್ಳಿ ಮತ್ತು ನೆಲಮಂಗಲದ ಬಳಿ ಸ್ಥಳಗಳನ್ನು ಗುರುತಿಸಿದೆ. ಭಾರತೀಯ ವಿಮಾನನಿಲ್ದಾಣ ಪ್ರಾಧಿಕಾರದ ಉನ್ನತ ಮಟ್ಟದ ತಂಡ ಇವುಗಳ ಪರಿಶೀಲನೆ ನಡೆಸಿ ಪ್ರಾಥಮಿಕ ವರದಿ ನೀಡಿದ್ದು ಈಗ ಟೆಂಡರಿನಲ್ಲಿ ಆಯ್ಕೆಯಾಗುವ ಸಲಹಾ ಸಂಸ್ಥೆಯು ೫ ತಿಂಗಳಲ್ಲಿ ಸರಕಾರಕ್ಕೆ ತನ್ನ ಸಮಗ್ರ ತಾಂತ್ರಿಕ ಮತ್ತು ಆರ್ಥಿಕ ಕಾರ್ಯಸಾಧ್ಯತಾ ವರದಿ ಕೊಡಬೇಕಿದೆ ಎಂದು ಅವರು ವಿವರಿಸಿದ್ದಾರೆ.

***************

ಕೋಲ್ಕತ್ತಾದ ಹೊರವಲಯದಲ್ಲಿರುವ ಸಾಲ್ಟ್ ಲೇಕ್ ಕ್ರೀಡಾಂಗಣದಲ್ಲಿ ಅರ್ಜೆಂಟೀನಾದ ಫುಟ್ಬಾಲ್ ಆಟಗಾರ ಲಿಯೋನೆಲ್ ಮೆಸ್ಸಿ ಭೇಟಿಗೆ ಸೀಮಿತ ಪ್ರವೇಶದ ಅವ್ಯವಸ್ಥೆ ಮತ್ತು ಹೆಚ್ಚಿನ ಟಿಕೆಟ್ ದರ ಪ್ರಕರಣದ ತನಿಖೆಗೆ ಕೋಲ್ಕತ್ತಾ ಹೈಕೋರ್ಟ್‌ನ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ನ್ಯಾಯಾಂಗ ಸಮಿತಿ ರಚಿಸುವುದಾಗಿ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ.

***************

ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯ ಹಿಮಾಚಲ ಪ್ರದೇಶದ ಧರ್ಮಶಾಲಾದಲ್ಲಿ ನಾಳೆ ನಡೆಯಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ.

ಐದು ಪಂದ್ಯಗಳ ಟಿ-೨೦ ಸರಣಿ, ಪ್ರಸ್ತುತ ೧-೧ರಲ್ಲಿ ಸಮಬಲದಲ್ಲಿದೆ. ಸರಣಿಯ ಆರಂಭಿಕ ಪಂದ್ಯದಲ್ಲಿ ಭಾರತ ಗೆಲುವು ಸಾಧಿಸಿದ್ದು, ಎರಡನೇ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಜಯಶಾಲಿಯಾಗಿದೆ. ಹೀಗಾಗಿ ಮೇಲುಗೈ ಸಾಧಿಸಲು ಉಭಯ ತಂಡಗಳಿಗೂ ಮೂರನೇ ಪಂದ್ಯ ಮಹತ್ವದ್ದಾಗಿದೆ.

*******ಮುಕ್ತಾಯ*******